# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ,
ಹೊರಮಾವು ಗ್ರಾಮ, ಬೆಂಗಳೂರು- 560113

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ 05/2020-21 ದಿನಾಂಕ: 05.12.2020

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/ 2020-21 ದಿನಾಂಕ:21/09/2020 ಹಾಗೂ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರು ದಿನಾಂಕ:-05.12.2020 ರಂದು ಹೊರಮಾವು ಉಪವಿಭಾಗದ ವಾರ್ಡ್-25 ರ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.

ಉಪಸ್ಥಿತರು:

| ಕ್ರ.ಸಂ | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| | | ಅಧಿಕಾರಿಗಳು | |
| 1 | ಶ್ರೀಮತಿ.ಸರೋಜಾದೇವಿ | ನೋಡಲ್ ಅಧಿಕಾರಿ ವಾ.ನಂ.25 ಹಾಗೂ ಉಪ ಆಯುಕ್ತರು (ಮಹದೇವಪುರ) | 9480684059 |
| 2 | ಶ್ರೀ.ಚಂದ್ರಶೇಖರ್.ಎ.ಜಿ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೊರಮಾವು) | 9844587466 |
| 3 | ಶ್ರೀ.ರಮೇಶ್ | ಜೆ.ಇ ಹೊರಮಾವು ವಾರ್ಡ-25 | 9739838297 |
| 4 | ಶ್ರೀ. ಸಂಜಯ್ ಕುಮಾರ್ | ಹಿರಿಯ ಆರೋಗ್ಯ ಪರಿವೀಕ್ಷಕರು | 9742919411 |
| 5 | ಶ್ರೀ.ತಿರುಮಲ ಪ್ರಸಾದ್ | BWSSB (PMC) | 9591646857 |
| 6 | ಶ್ರೀ.ವಿನೋದ್‌ಕುಮಾರ್ | ವಾರ್ಡ್ ನಂ.25 ಕಂದಾಯ ಪರಿವೀಕ್ಷಕರು | 9900116515 |
| 7 | ಶ್ರೀ.ಕೋದಂಡಪ್ಪ | ಬೀದಿದೀಪ | 9902031602 |
| | | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು. | |
| 08 | ಶ್ರೀ.ಆರ್ಮುಗಂ, ದಾಮೋದರನ್ ಮತ್ತು ಹೆಚ್.ಎನ್.ವಿಜಯ ಸರ್.ಎಂ.ವಿ ನಗರ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ | - | - |
| 09 | ಶ್ರೀಮತಿ.ರತ್ನಗೌಡ ರೋಚಿ ಎನ್‌ಕ್ಲೇವ್ ವೆಲ್‌ಫೇರ್ ಅಸೋಸಿಯೇಷನ್ | - | - |
| 10 | ಶ್ರೀಮತಿ.ಸುಭಾಷಿಣಿ ಪರ್ನ್ಸ್ ವೆಲ್‌ಫೇರ್ ಅಸೋಸಿಯೇಷನ್ ಕೆ.ನಾರಾಯಣಪುರ | | |
| 11 | ಶ್ರೀ.ಪಿಳ್ಳಪ್ಪ ಬಾಲಾಜಿ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ | | |
| 12 | ಶ್ರೀಮತಿ.ಸಿಂಧು ಜಾನ್ಸನ್ (ಕನಕಗಿರಿ ಬಡಾವಣೆ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್) | - | - |
| 13 | ಶ್ರೀಮತಿ.ಸುಜಾತ ನಂದನಂ ಬಡಾವಣೆ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ | - | - |
| 14 | ಶ್ರೀ.ನವೀನ್ ಎಸ್.ಎಲ್.ವಿ ಬಡಾವಣೆ ವೆಲ್‌ಫೇರ್ ಅಸೋಸಿಯೇಷನ್ ಹೊರಮಾವು ಅಗರ ಮುಖ್ಯರಸ್ತೆ | - | - |

Scanned with CamScanner

ಮಾನ್ಯ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.25 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿಡಬ್ಲೂಎಸ್‌ಎಸ್‌ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.

## ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚೆ:-

**ಶ್ರೀ.ಆರ್ಮುಗಂ, ದಾಮೋದರನ್ ಮತ್ತು ಹೆಚ್.ಎನ್.ವಿಜಯ ಸರ್.ಎಂ.ವಿ ನಗರ ರೆಸಿಡೆನ್ಶಿಯಲ್ ವೆಲ್‌ಫೇರ್ ಅಸೋಸಿಯೇಷನ್:-** ರವರು ಮಾತನಾಡಿ 5ನೇ ಬಿ.ಸಿ ಮುಖ್ಯರಸ್ತೆಯಲ್ಲಿ ಡಾಂಬರೀಕರಣ ಮಾಡಿಕೊಡಲು ದಿನಾಂಕ:21.11.2020 ರಂದು ಕೋರಿರುತ್ತಾರೆ. ಅದರಂತೆ 5ನೇ ಬಿ.ಸಿ ಮುಖ್ಯರಸ್ತೆಯಲ್ಲಿ ಡಾಂಬರೀಕರಣ ಪೂರ್ಣಗೊಳಿಸಿರುವುದಕ್ಕೆ ಸಭೆಯಲ್ಲಿ ಧನ್ಯವಾದಗಳನ್ನು ತಿಳಿಸಿದರು. ಹಾಗೂ 19ನೇ ಅಡ್ಡರಸ್ತೆಯಲ್ಲಿ ಬೀದಿ ದೀಪ ಅಳವಡಿಸಲು ಹಾಗೂ ಚರಂಡಿ ಬ್ಲಾಕ್ ಆಗಿದ್ದು, ನೀರು ಸರಾಗವಾಗಿ ಹರಿಯದೇ ಇದ್ದು ಇದನ್ನು ತುರ್ತಾಗಿ ಪರಿಶೀಲಿಸಿ, ದುರಸ್ಥಿ ಪಡಿಸಲು ಕೋರಿರುತ್ತಾರೆ.

ಕ್ರಮ:- ವಾರ್ಡ್ ಸಂಖ್ಯೆ 25 ರ ಕಿರಿಯ ಅಭಿಯಂತರರಿಗೆ ಕೂಡಲೇ ಸ್ಥಳ ಪರಿಶೀಲಿಸಿ ಕ್ರಮವಹಿಸಲು ಸಭೆಯು ಸೂಚಿಸಲಾಯಿತು.

**ಶ್ರೀಮತಿ.ರತ್ನಗೌಡ ರೋಚ ಎನ್‌ಕ್ಲೇವ್ ವೆಲ್‌ಫೇರ್ ಅಸೋಸಿಯೇಷನ್:-** ರವರು ಮಾತನಾಡಿ ಈಗಾಗಲೇ ಕಾವೇರಿ ಮತ್ತು ಒಳಚರಂಡಿ ಸಂಪರ್ಕ ಪೂರ್ಣಗೊಂಡಿದ್ದು, ಈ ಬಡಾವಣೆಯ ರಸ್ತೆಗಳಲ್ಲಿ ಓಡಾಡಲು ತುಂಬಾ ತೊಂದರೆಯಾಗಿದ್ದು, ರಸ್ತೆಗಳನ್ನು ಅಭಿವೃದ್ಧಿಪಡಿಸಿ ಡಾಂಬರೀಕರಣ ಮಾಡಲು ಕೋರಿರುತ್ತಾರೆ.

ಕ್ರಮ:- ವಾರ್ಡ್ ಸಂಖ್ಯೆ 25 ರ ಕಿರಿಯ ಅಭಿಯಂತರರು ಸಭೆಗೆ ತಿಳಿಸಿ 2020-21 ನೇ ಸಾಲಿನ ಆಯವ್ಯಯದಲ್ಲಿ ಸದರಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಅನುದಾನವನ್ನು ಕಾಯ್ದಿರಿಸಿದ್ದು, ಟೆಂಡರ್ ಕರೆದು ಕಾಮಗಾರಿಯನ್ನು ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

**ಶ್ರೀಮತಿ.ಸುಭಾಷಿಣಿ ಪರ್ನ್ ವೆಲ್‌ಫೇರ್ ಅಸೋಸಿಯೇಷನ್ ಕೆ.ನಾರಾಯಣಪುರ:-** ರವರು ಮಾತನಾಡಿ ನವಜ್ಯೋತಿ ರಸ್ತೆ ಕೂಡಲೇ ಡಾಂಬರೀಕರಣ ಮಾಡಲು ಮತ್ತು ಕೆ.ನಾರಾಯಣಪುರ ಕ್ರಿಸ್ತು ಜಯಂತಿ ಕಾಲೇಜು ರಸ್ತೆಯು ತುಂಬಾ ಹಾಳಾಗಿದ್ದು, ವಾಹನಗಳ ಸಂಚಾರ ಹೆಚ್ಚಾಗಿದ್ದು, ಈ ರಸ್ತೆಯಲ್ಲಿ ಅಪಘಾತಗಳು ಸಂಭವಿಸುತ್ತಿದ್ದು, ಕೂಡಲೇ ರಸ್ತೆ ದುರಸ್ಥಿ ಮಾಡಲು ಹಾಗೂ ಗೋಲ್ಡನ್ ಪಾರ್ಮ್ ರಸ್ತೆ ಅಭಿವೃದ್ಧಿ ಪಡಿಸಲು ಕೋರಿರುತ್ತಾರೆ.

ಕ್ರಮ:- ವಾರ್ಡ್ ಸಂಖ್ಯೆ 25 ರ ಕಿರಿಯ ಅಭಿಯಂತರರು ಸಭೆಗೆ ತಿಳಿಸಿ ನವಜ್ಯೋತಿ ರಸ್ತೆಯನ್ನು ದಿನಾಂಕ:-15.12.2020 ರ ಒಳಗೆ ಡಾಂಬರೀಕರಣ ಮಾಡಲು ಕ್ರಮ ವಹಿಸಲಾಗುವುದು ಹಾಗೂ ಕೆ.ನಾರಾಯಣಪುರ ಕ್ರಿಸ್ತು ಜಯಂತಿ ಕಾಲೇಜು ರಸ್ತೆಯಲ್ಲಿ ಬೆಂಗಳೂರು ಜಲಮಂಡಳಿ ವತಿಯಿಂದ ಕೊಳವೆಸಾಲು ಛೇಂಬರ್ ಅಳವಡಿಸುವ ಕೆಲಸವು ದಿನಾಂಕ:15.12.2020 ಕ್ಕೆ ಪೂರ್ಣಗೊಳ್ಳುವುದಾಗಿ ಸಭೆಗೆ ಜಲಮಂಡಳಿ ಸಹಾಯಕ ಅಭಿಯಂತರರಾದ ಶ್ರೀ.ಚಂದನ್ ರವರು ದೂರವಾಣಿ ಮುಖಾಂತರ ತಿಳಿಸಿದ್ದು, ಈ ರಸ್ತೆಯನ್ನು ಅಭಿವೃದ್ಧಿಪಡಿಸಿ ಡಾಂಬರಿಕರಣ ಮಾಡಲು ರೂ.4.00 ಕೋಟಿಗಳ ವೆಚ್ಚದಲ್ಲಿ ಜಾಬ್‌ಸಂಖ್ಯೆ 25-21-000012, ದಿನಾಂಕ:25.11.2020 ರಂದು ಅನುದಾನವು ಬಿಡುಗಡೆಗೊಂಡಿದ್ದು, ತುರ್ತಾಗಿ ಟೆಂಡರ್ ಕರೆದು ಕಾಮಗಾರಿಯನ್ನು ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ. ಹಾಗೂ ಬಿ.ಡಿ.ಎ ವತಿಯಿಂದ ಗೋಲ್ಡನ್ ಪಾರ್ಮ್ ರಸ್ತೆಯನ್ನು ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುವುದೆಂದು ಬಿ.ಡಿ.ಎ ಅಭಿಯಂತರರಾದ ಶ್ರೀ.ವೀರಭದ್ರಯ್ಯರವರು ದೂರವಾಣಿ ಮುಖಾಂತರ ತಿಳಿಸಿರುತ್ತಾರೆ.

Scanned with CamScanner

ಶ್ರೀ.ಪಿಳ್ಳಪ್ಪ ಬಾಲಾಜಿ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್:- ಸದರಿ ಬಡಾವಣೆಯಲ್ಲಿ ಬೆಂಗಳೂರು ಜಲಮಂಡಳಿ ವತಿಯಿಂದ ಸರ್ವೀಸ್ ಛೇಂಬರ್‌ನ್ನು ಅಳವಡಿಸಲು ಮತ್ತು ಪಾಲಿಕೆಯ ಸುಮಾರು 1.00ಕಿ.ಮೀ ಪೈಪ್‌ಲೈನ್ ಹಾಳಾಗಿದ್ದು, ಈ ಪೈಪ್‌ಲೈನ್‌ನ್ನು ಬದಲಾಯಿಸಿ ಕೊಳವೆಸಾಲನ್ನು ಅಳವಡಿಸಿದ ನಂತರ ಎಲ್ಲಾ ರಸ್ತೆಗಳ ಡಾಂಬರೀಕರಣ ಮಾಡಲು ಕೋರಿರುತ್ತಾರೆ.

ಕ್ರಮ:- ಬಿ.ಬಿ.ಎಂ.ಪಿ ವಾರ್ಡ್ ಅಭಿಯಂತರರು ಕೂಡಲೇ ಕ್ರಮವಹಿಸಲು ಸಭೆಯು ಸೂಚಿಸಿತು.

ಶ್ರೀಮತಿ.ಸಿಂಧು ಜಾನ್ಸನ್ (ಕನಕಗಿರಿ ಬಡಾವಣೆ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್):- ಬಂಜಾರ ಬಡಾವಣೆ, ಗೋವಿಂದಪ್ಪ ಲೇಔಟ್ 7ನೇ ಮತ್ತು 8ನೇ ಅಡ್ಡರಸ್ತೆ ಯಲ್ಲಿ ಚರಂಡಿ ನಿರ್ಮಿಸಿ ರಸ್ತೆ ಅಭಿವೃದ್ಧಿ ಪಡಿಸಲು ಹಾಗೂ ಡಿ.ಎಸ್ ಮ್ಯಾಕ್ಸ್ ಎದುರು ಶೆಡ್‌ಗಳಲ್ಲಿ ಇರುವ ಕಾರ್ಮಿಕರಿಂದ ವಾಹನ ನಿಲುಗಡೆಗೆ ತೊಂದರೆಯಾಗುತ್ತಿದ್ದು, ಸ್ಯಾನಿಟರಿ ವೇಸ್ಟ್‌ನ್ನು ಚರಂಡಿ ಮತ್ತು ರಸ್ತೆಗೆ ಬಿಡುತ್ತಿದ್ದು, ಇದರಿಂದ ತೊಂದರೆಯಾಗುತ್ತಿರುವುದಾಗಿ ಕೋರಿರುತ್ತಾರೆ.

ಕ್ರಮ:- ವಾರ್ಡ್ ಸಹಾಯಕ ಅಭಿಯಂತರರು, ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರುಗಳು ಕ್ರಮ ವಹಿಸಲು ಸಭೆಯು ಸೂಚಿಸಲಾಗಿದೆ.

ಶ್ರೀಮತಿ.ಸುಜಾತ ನಂದನಂ ಬಡಾವಣೆ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್:- ನಂದನಂ ಬಡಾವಣೆ, 4ನೇ ಅಡ್ಡರಸ್ತೆಯಲ್ಲಿ ಸರ್ಕಾರಿ ರಸ್ತೆಯಿದ್ದು, ಈ ಬಡಾವಣೆಯಲ್ಲಿ ಯಾವುದೇ ಸಾರ್ವಜನಿಕ ಲೈಬ್ರೆರಿ ಮತ್ತು ಸಾಂಸ್ಕೃತಿಕ ಚಟುವಟಿಕೆ ನಡೆಸಲು ಕಟ್ಟಡ ಇಲ್ಲದೇ ಇರುವುದರಿಂದ ಈ ಸರ್ಕಾರಿ ಜಾಗದಲ್ಲಿ ಸದರಿ ಕಟ್ಟಡಗಲನ್ನು ನಿರ್ಮಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಕೋರಿರುತ್ತಾರೆ.

ಕ್ರಮ:- ವಾರ್ಡ್ ಸಹಾಯಕ ಅಭಿಯಂತರರಿಗೆ ಕ್ರಮ ವಹಿಸಲು ಸಭೆಯು ಸೂಚಿಸಲಾಗಿದೆ.

ಶ್ರೀ.ನವೀನ್ ಎಸ್.ಎಲ್.ವಿ ಬಡಾವಣೆ ವೆಲ್‌ಫೇರ್ ಅಸೋಸಿಯೇಷನ್ ಹೊರಮಾವು ಅಗರ ಮುಖ್ಯರಸ್ತೆ:- ಟ್ರಾನ್ಸ್‌ಫಾರ್ಮರ್‌ನಿಂದ ವಿದ್ಯುತ್ ವ್ಯತ್ಯಯವಾಗುತ್ತಿದ್ದು, ಸದರಿ ಟ್ರಾನ್ಸ್‌ಫಾರ್ಮರ್ ಅರ್ಥಿಂಗ್ ಮಾಡುವುದು ಅವಶ್ಯಕತೆ ಇರುತ್ತದೆ ಎಂದು ಕೋರಿರುತ್ತಾರೆ.

ಕ್ರಮ:- ಸಹಾಯಕ ಅಭಿಯಂತರರು, ಬೆಸ್ಕಾಂ ರವರಿಗೆ ಇದರ ಬಗ್ಗೆ ಕ್ರಮವಹಿಸಲು ಸಭೆಯು ಸೂಚಿಸಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸ.ಕಾ.ಅ ಹೊರಮಾವು ರವರು ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನೋಡಲ್ ಅಧಿಕಾರಿ ವಾರ್ಡ್ ನಂ.25
ಹಾಗೂ ಉಪ ಆಯುಕ್ತರು
(ಮಹದೇವಪುರ) ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

5/12/2020
ಸಹಾಯಕ ಕಾರ್ಯಪಾಲಕ ಅಭಿಯಂತರರು
ಹೊರಮಾವು ಉಪ-ವಿಭಾಗ.

Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ, ಹೊರಮಾವು ಗ್ರಾಮ, ಬೆಂಗಳೂರು- 560113**

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ 06/2020-21

ದಿನಾಂಕ: 19.12.2020

*ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/ 2020-21 ದಿನಾಂಕ:21/09/2020 ಹಾಗೂ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರು ದಿನಾಂಕ:-19.12.2020 ರಂದು ಹೊರಮಾವು ಉಪವಿಭಾಗದ ವಾರ್ಡ್-25 ರ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.*

**ಉಪಸ್ಥಿತರು:**

| ಕ್ರ.ಸಂ | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| | | ಅಧಿಕಾರಿಗಳು | |
| 1 | ಶ್ರೀಮತಿ.ಸರೋಜಾದೇವಿ | ನೋಡಲ್ ಅಧಿಕಾರಿ ವಾ.ನಂ.25 ಹಾಗೂ ಉಪ ಆಯುಕ್ತರು (ಮಹದೇವಪುರ) | 9480684059 |
| 2 | ಶ್ರೀಮತಿ.ಜ್ಯೋತಿಲಕ್ಷ್ಮಿ | ಸ.ಕಂ.ಅ ಹೊರಮಾವು | 9108201798 |
| 3 | ಶ್ರೀ.ಚಂದ್ರಶೇಖರ್.ಎ.ಜಿ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೊರಮಾವು) | 9844587466 |
| 4 | ಶ್ರೀ.ರಮೇಶ್ | ಕಿ.ಇ ಹೊರಮಾವು ವಾರ್ಡ್-25 | 9739838297 |
| 5 | ಶ್ರೀ.ಚಂದನ್ | BWSSB (AE) | |
| 6 | ಶ್ರೀ.ಸತೀಶ್‌ಕುಮಾರ್.ಸಿ.ಆರ್ | AE (SWD) BBMP | |
| 7 | ಶ್ರೀ.ತಿರುಮಲ ಪ್ರಸಾದ್ | BWSSB (PMC) | 9591646857 |
| 8 | ಶ್ರೀ.ವಿನೋದ್‌ಕುಮಾರ್ | ವಾರ್ಡ್ ನಂ.25 ಕಂದಾಯ ಪರಿವೀಕ್ಷಕರು | 9900116515 |
| 9 | ಶ್ರೀ.ಕೋದಂಡಪ್ಪ | ಬೀದಿದೀಪ | 9902031602 |
| 10 | ಶ್ರೀ.ಮುನಿಲಕ್ಕಪ್ಪ | ASI ಕೊತ್ತನೂರು ಪೋಲೀಸ್ ಠಾಣೆ | 9448611820 |
| | | | |
| 11 | ಶ್ರೀಮತಿ.ಸುಭಾಷಿಣಿ ಪರ್ನ್ಸ್ ವೆಲ್‌ಫೇರ್ ಅಸೋಸಿಯೇಷನ್ ಕೆ.ನಾರಾಯಣಪುರ | - | - |
| 12 | ಶ್ರೀ.ಮೋಹನ್ ಕೃಷ್ಣನ್, ಬ್ರಿಗೇಡ್ ಆಲ್ಟಮಾನ್ | - | - |
| 13 | ಶ್ರೀ.ಆರ್ಮುಗಂ, ದಾಮೋದರನ್ ಸರ್.ಎಂ.ವಿ ನಗರ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ | - | - |
| 14 | ಶ್ರೀ.ಜಿ.ಎನ್.ಮಠ್, ಪಾಪಣ್ಣ ಲೇಔಟ್, 4ನೇ ಅಡ್ಡರಸ್ತೆ, ಆರ್.ಎಂ.ನಗರ | - | - |
| 15 | ಶ್ರೀ.ಟೋನಿಸ್ವಾಮಿ ಸಾಯಿ ಬಡಾವಣೆ | - | - |
| 16 | ಶ್ರೀ.ಜೀನಚಂದ್ರ ಹೊಯ್ಸಳನಗರ ಅಸೋಸಿಯೇಷನ್, 14ನೇ ಅಡ್ಡರಸ್ತೆ. | - | - |
| 17 | ರೇವಣ್ಣ ಜಯಂತಿನಗರ | - | - |
| 18 | ಶ್ರೀ.ಪಿಳ್ಳಪ್ಪ ಬಾಲಾಜಿ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ | - | - |

Scanned with CamScanner

ಮಾನ್ಯ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.25 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿಡಬ್ಲೂಎಸ್ಎಸ್‌ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.

<u>ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚೆ:-</u>

<u>ಶ್ರೀಮತಿ.ಸುಭಾಷಿಣಿ ಮತ್ತು ಶ್ರೀಮತಿ.ಇಂದಿರಾ ಇತರರು, ಪರ್ಸ್ಟ್ ವೆಲ್‌ಫೇರ್ ಅಸೋಸಿಯೇಷನ್ ಕೆ.ನಾರಾಯಣಪುರ:-</u> ರವರು ಮಾತನಾಡಿ ನವಜ್ಯೋತಿ ರಸ್ತೆ (ಪರ್ಸ್ಟ್ ಮುಖ್ಯರಸ್ತೆಗೆ ಈಗಾಗಲೇ ಜಲ್ಲಿ ಅಳವಡಿಸಿ ಸುಮಾರು 11 ತಿಂಗಳುಗಳಾಗಿದ್ದು, ಇದುವರೆವಿಗೂ ಡಾಂಬರೀಕರಣ ಆಗಿರುವುದಿಲ್ಲ. ಈ ರಸ್ತೆಯಲ್ಲಿ ಓಡಾಡಲು ತುಂಬಾ ತೊಂದರೆಯಾಗುತ್ತಿದ್ದು, ಅಪಘಾತಗಳು ಸಹ ಸಂಭವಿಸುತ್ತಿದ್ದು, ಹಿಂದಿನ 2 ಸಭೆಗಳಲ್ಲಿ ಡಾಂಬರೀಕರಣ ಮಾಡುವ ಬಗ್ಗೆ ಕೋರಲಾಗಿದ್ದರೂ ಸಹ ಇದುವರೆವಿಗೂ ಡಾಂಬರೀಕರಣ ಮಾಡಲು ಗುತ್ತಿಗೆದಾರರ ವಿರುದ್ಧ ಯಾವುದೇ ಕ್ರಮವಹಿಸದಿರುವ ಬಗ್ಗೆ ಅಸಮಧಾನ ವ್ಯಕ್ತಪಡಿಸಿ ದಿನಾಂಕ:30.12.2020 ರ ವರೆಗೆ ಅಂತಿಮ ಗಡುವು ನೀಡಿ ಈ ಅವಧಿಯ ಓಳಗೆ ಡಾಂಬರೀಕರಣ ಮಾಡಲು ಕೋರಿಕೊಂಡಿರುತ್ತಾರೆ. ಮತ್ತು ಗೋಲ್ಡನ್ ಪಾರ್ಮ್ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕೊಳವೆಸಾಲು ಅಳವಡಿಸಲಾಗಿದ್ದು, ಅದರ ಅನುಪಯುಕ್ತ ಮಣ್ಣನ್ನು ತೆಗೆದು ಸದರಿ ರಸ್ತೆಯು ಬಿ.ಡಿ.ಎ ವ್ಯಾಪ್ತಿಗೆ ಬರುತ್ತಿದ್ದು, ಬಿ.ಡಿ.ಎ ವತಿಯಿಂದ ಡಾಂಬರೀಕರಣ ಮಾಡಲು ಕೋರಿಕೊಂಡಿರುತ್ತಾರೆ. ಈ ಕುರಿತು ದಿನಾಂಕ:22.12.2020 ರಂದು ಬಿ.ಬಿ.ಎಂ.ಪಿ/ಬಿ.ಡಬ್ಲ್ಯೂ.ಎಸ್.ಎಸ್.ಬಿ/ಬಿ.ಡಿ.ಎ ಅಧಿಕಾರಿಗಳು ಜಂಟಿಯಾಗಿ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

<u>ಕ್ರಮ:-</u> ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ವಾರ್ಡ್ ಸಂಖ್ಯೆ 25 ರ ಕಿರಿಯ ಅಭಿಯಂತರರು ಸಭೆಗೆ ತಿಳಿಸಿ ಗುತ್ತಿಗೆದಾರರ ವಿರುದ್ಧ ಕ್ರಮ ಜರುಗಿಸಿ ಡಾಂಬರೀಕರಣ ಮಾಡಲು ಕ್ರಮ ವಹಿಸಲು, ಇಲ್ಲದಿದ್ದಲ್ಲಿ ಕಡತವನ್ನು ಮುಖ್ಯಅಭಿಯಂತರರ ಮುಖೇನ ವಿಶೇಷ ಆಯುಕ್ತರಿಗೆ ಗುತ್ತಿಗೆದಾರರ ವಿರುದ್ಧ ಕ್ರಮವಹಿಸಲು ಶಿಫಾರಸ್ಸಿಗಾಗಿ ಕಡತವನ್ನು ಸಲ್ಲಿಸಲು ಸಭೆಯು ಸೂಚಿಸಿತು.

<u>ಶ್ರೀ.ಆರ್ಮುಗಂ, ದಾಮೋದರನ್ ಮತ್ತು ಶ್ರೀ.ನಂಜಪ್ಪ ಸರ್.ಎಂ.ವಿ ನಗರ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್:-</u> ರವರು ಮಾತನಾಡಿ ಸರ್.ಎಂ.ವಿ ನಗರ 8ನೇ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳು ಡಾಂಬರೀಕರಣ ಆಗದಿರುವ ಬಗ್ಗೆ ಹಾಗೂ ಗುತ್ತಿಗೆದಾರರಾದ ಶ್ರೀ.ವಸಂತ್‌ಕುಮಾರ್ ರವರಿಗೆ ನೋಟೀಸ್ ಜಾರಿಮಾಡಿ ಡಾಂಬರೀಕರಣ ಮಾಡಲು ಅಧಿಕಾರಿಗಳು ಕ್ರಮಕೈಗೊಳ್ಳಲು ಕೋರಿರುತ್ತಾರೆ.

<u>ಕ್ರಮ:-</u> ಸಹಾಯಕ ಕಾರ್ಯಪಾಲಕ ಅಭಿಯಂತರರು ಹೊರಮಾವು ಉಪ-ವಿಭಾಗ ರವರು ಕ್ರಮವಹಿಸಲು ಸಭೆಯು ಸೂಚಿಸಲಾಯಿತು.

<u>ಶ್ರೀ ರೇವಣ್ಣ ಜಯಂತಿಗ್ರಾಮ:-</u> ರವರು ಮಾತನಾಡಿ ಈಗಾಗಲೇ ಜಯಂತಿಗ್ರಾಮದ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಕಾಂಕ್ರೀಟ್ ರಸ್ತೆ ಹಾಕಲಾಗಿದ್ದು, ಅಂಬೇಡ್ಕರ್ ಪ್ರತಿಮೆ ರಸ್ತೆ ಮತ್ತು ಚಾಮುಂಡೇಶ್ವರಿ ದೇವಸ್ಥಾನ ಮುಖ್ಯರಸ್ತೆಯಲ್ಲಿ ಅತಿವೇಗವಾಗಿ ವಾಹನಗಳು ಬರುತ್ತಿದ್ದು, ಅಪಘಾತಗಳು ಸಂಭವಿಸುತ್ತಿರುವುದರಿಂದ ಪರಿಶೀಲಿಸಿ ರಸ್ತೆಯ ಉಬ್ಬುಗಳನ್ನು ಅಳವಡಿಸಲು ಕೋರಿರುತ್ತಾರೆ.

<u>ಕ್ರಮ:-</u> ವಾರ್ಡ್ ಸಂಖ್ಯೆ 25 ರ ಕಿರಿಯ ಅಭಿಯಂತರರು ಸಭೆಗೆ ತಿಳಿಸಿ ಸ್ಥಳ ಪರಿಸೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

<u>ಶ್ರೀ.ಪಿಳ್ಳಪ್ಪ ಬಾಲಾಜಿ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್:-</u> ಬಾಬುಸಾಪಾಳ್ಯ ಪ್ರಕೃತಿ ಬಡಾವಣೆ ಮುಖ್ಯರಸ್ತೆಯಲ್ಲಿ ಬೃಹತ್ ರಸ್ತೆ ವಿಭಾಗದಿಂದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿರುವುದು ಸರಿಯಷ್ಟೆ, ಆದರೆ ಸದರಿ ರಸ್ತೆಯು ಮುಖ್ಯರಸ್ತೆಯಾಗಿದ್ದು, ಚರಂಡಿಯನ್ನು ನಿರ್ಮಿಸದೆ ಹೂಳು ತೆಗೆಯದೆ ಕಾಮಗಾರಿಯನ್ನು ಮಾಡುತ್ತಿದ್ದು, ಈ ಬಗ್ಗೆ ಸಂಬಂಧಿಸಿದ ಅಭಿಯಂತರರಾದ ಶ್ರೀ.ಸತೀಶ್‌ರವರಿಗೆ ತಿಳಿಸಿದರೂ ಸಹ ಯಾವುದೇ ರೀತಿಯ ಕ್ರಮ ವಹಿಸಿರುವುದಿಲ್ಲ ಮತ್ತು ಸಭೆಗೂ ಬಂದಿರುವುದಿಲ್ಲವೆಂದು ಕೂಡಲೆ ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಕೋರಿಕೊಂಡಿರುತ್ತಾರೆ.

<u>ಕ್ರಮ:-</u> ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳ ವಿಭಾಗ ರವರು ಕೂಡಲೇ ಕ್ರಮವಹಿಸಲು ಸಭೆಯು ಸೂಚಿಸಿತು.

Scanned with CamScanner

**ಶ್ರೀ.ಜೀನಚಂದ್ರ ಹೊಯ್ಸಳನಗರ ಅಸೋಸಿಯೇಷನ್, 14ನೇ ಅಡ್ಡರಸ್ತೆ:-** ರವರು ಮಾತನಾಡಿ ಸದರಿ ರಸ್ತೆಯಲ್ಲಿ ಇದುವರೆವಿಗೂ ಪಾಲಿಕೆ ವತಿಯಿಂದ ಕೊಳವೆಸಾಲು ಅಳವಡಿಸಿ ಕುಡಿಯುವನೀರು ಒದಗಿಸದಿರುವ ಬಗ್ಗೆ ಕೂಡಲೇ ಕ್ರಮ ವಹಿಸಲು ಕೋರಿಕೊಂಡಿರುತ್ತಾರೆ. ಈ ಬಗ್ಗೆ ಸಂಬಂದಿಸಿದ ಅಭಿಯಂತರರು ಮಾತನಾಡಿ ಈಗಾಗಲೇ ಪಾಲಿಕೆ ವತಿಯಿಂದ 14ನೇ ಅಡ್ಡರಸ್ತೆಯಲ್ಲಿ 2 ಕೊಳವೆಬಾವಿಗಳನ್ನು ಕೊರೆಯಲಾಗಿದ್ದು, ವಿಫಲಗೊಂಡಿದ್ದು, ಸದರಿ ರಸ್ತೆಯಲ್ಲಿ ನೀರು ದೊರಕದೇ ಇರುವುದರಿಂದ ನೀರು ಒದಗಿಸಲು ಆಗಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಈ ಬಗ್ಗೆ ಇನ್ನಮ್ಮೆ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಕೋರಿಕೊಂಡಿರುತ್ತಾರೆ.

**ಕ್ರಮ:-** ವಾರ್ಡ್ ಅಭಿಯಂತರರಿಗೆ ಕೂಡಲೇ ಕ್ರಮವಹಿಸಲು ಸಭೆಯು ಸೂಚಿಸಿತು.

**ಶ್ರೀ.ಟೋನಿಸ್ವಾಮಿ ಸಾಯಿ ಬಡಾವಣೆ:-** ರವರು ಮಾತನಾಡಿ ಸಾಯಿಬಾಬ ಬಡಾವನೆಗೆ ಹೊಂದಿಕೊಂಡಂತಿರುವ ಅರ್ಕಾವತಿ ಬಡಾವಣೆಯಲ್ಲಿ ಬಿ.ಡಿ.ಎ ವತಿಯಿಂದ ಮಳೆನೀರು ಹರಿಯಲು ಮಳೆನೀರು ಚರಂಡಿಯನ್ನು ಇದುವರೆವಿಗೂ ರೀಗ್ರೇಡ್ ಮಾಡದಿರುವ ಕುರಿತು ಮತ್ತು ರಾಜಕಾಲುವೆ ಗೋಡೆಯನ್ನು ನಿರ್ಮಿಸದಿರುವ ಬಗ್ಗೆ ಸಭೆಯಲ್ಲಿ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿ ಕೋರಿಕೊಂಡಿರುತ್ತಾರೆ.

**ಕ್ರಮ:-** ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಿ.ಎ ರವರು ಸಭೆಗೆ ಹಾಜರಾಗಿರುವುದಿಲ್ಲವಾದ್ದರಿಂದ ಸದರಿ ರವರು ಕ್ರಮವಹಿಸಲು ಪತ್ರ ಬರೆಯಲು ಹಾಗೂ ರಾಜಕಾಲುವೆ ತಡೆಗೋಡೆ ನಿರ್ಮಾಣದ ಬಗ್ಗೆ ಸ.ಕಾ.ಅ ಬೃಹತ್ ನೀರುಗಾಲುವೆ ವಿಭಾಗ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

**ಶ್ರೀ.ಜಿ.ಎನ್.ಮಠ್, ಪಾಪಣ್ಣ ಲೇಔಟ್, 4ನೇ ಅಡ್ಡರಸ್ತೆ, ಆರ್.ಎಂ.ನಗರ:-** ರವರು ಮಾತನಾಡಿ ತಮ್ಮ ನಿವೇಶನದಲ್ಲಿ ಕೊಳವೆಬಾವಿ ಕೊರೆಯಲು ಬೆಂಗಳೂರು ಜಲಮಂಡಳಿ ವತಿಯಿಂದ ಅನುಮತಿ ಪಡೆಯಲಾಗಿದ್ದು, ಸ್ಥಳೀಯವಾಗಿ ಕೆಲವು ವ್ಯಕ್ತಿಗಳು ಕೊಳವೆಬಾವಿ ಕೊರೆಯಬಾರದೆಂದು ವಿನಾಕಾರಣ ತೊಂದರೆ ನೀಡುತ್ತಿರುವುದಾಗಿ ಮಾನಸಿಕವಾಗಿ ಘಾಸಿ ಉಂಟಾಗಿದ್ದು, ನನಗೆ ಕೊಳವೆಬಾವಿ ಕೊರೆಯಲು ನ್ಯಾಯ ದೊರೆಕಿಸಿಕೊಡಬೇಕೆಂದು ಪಾಲಿಕೆ ಅಧಿಕಾರಿಗಳಿಗೆ ಕೋರಿಕೊಂಡಿರುತ್ತಾರೆ.

**ಕ್ರಮ:-** ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ರವರು ಸದರಿ ಸ್ಥಳ ಪರಿಶೀಲಿಸಿ ಸದರಿ ರವರಿಗೆ ಕೊಳವೆಬಾವಿ ಕೊರೆಯಲು ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ವಾರ್ಡ್ ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರುಗಳು ಹಾಗೂ ಸಹಾಯಕ ಅಭಿಯಂತರರುಗಳು, ಬೃಹತ್ ರಸ್ತೆಗಳ ವಿಭಾಗ, ಸಹಾಯಕ ಅಭಿಯಂತರರು ಬೆಸ್ಕಾಂ-ದೂರವಾಣಿನಗರ, ಬಾಣಸವಾಡಿ, ನಾಗವಾರ, ಆರಕ್ಷಕ ಸಿಬ್ಬಂಧಿಗಳು- ರಾಮಮೂರ್ತಿನಗರ, ಹೆಣ್ಣೂರು ಪೋಲೀಸ್‌ಠಾಣೆ, ಆರಕ್ಷಕ ಸಿಬ್ಬಂಧಿಗಳು ಸಂಚಾರ ವಿಭಾಗ-ಕೆ.ಆರ್.ಪುರ, ರಾಮಮೂರ್ತಿನಗರ, ಬಾಣಸವಾಡಿ ಹಾಗೂ ಸಹಾಯಕ ಅಭಿಯಂತರರು ಬೆಂಗಳೂರು ಅಬಿವೃದ್ಧಿ ಪ್ರಾಧಿಕಾರ ರವರಿಗೆ ಈ ದಿನ ಸಭೆಗೆ ಹಾಜರಾಗಲು ಸೂಚಿಸಿದ್ದರೂ ಸಹ ಸದರಿ ರವರು ಗೈರುಹಾಜರಾಗಿದ್ದು, ಈ ಕುರಿತು ಸಾರ್ವಜನಿಕರು ಸಭೆಗೆ ಹಾಜರಾಗದ ಅಧಿಕಾರಿಗಳ ವಿರುದ್ಧ ಅಸಮಧಾನ ವ್ಯಕ್ತಪಡಿಸಿ ಮುಂದಿನ ಸಭೆಯಲ್ಲಿ ಎಲ್ಲರೂ ಹಾಜರಾಗಲೂ ಕ್ರಮಕೈಗೊಳ್ಳಲು ಕೋರಿಕೊಂಡಿದ್ದು, ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸ.ಕಾ.ಅ ಹೊರಮಾವು ಉಪ-ವಿಭಾಗ ರವರು ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಿದರು.

M. S–h

ನೋಡಲ್ ಅಧಿಕಾರಿ ವಾರ್ಡ್ ನಂ.25
ಹಾಗೂ ಉಪ ಆಯುಕ್ತರು
(ಮಹದೇವಪುರ) ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಿರಿಯ ಅಭಿಯಂತರರು
ಹೊರಮಾವು ವಾರ್ಡ್‌ನಂ.25
ಬಿ.ಬಿ.ಎಂ.ಪಿ

Scanned with CamScanner